ಪ್ರಸಿದ್ಧ ಪತ್ರಿಕೆ.

ಶ್ರೀಮನ್ಮಹಾರಾಜ ಚಾಮರಾಜೇಂದ್ರ ಒಡೆಯರ್ ಬಹದ್ದೂರ್ ಜಿ. ಸಿ. ಎಸ್. ಐ. ಮಹಾಸ್ವಾಮಿಯವರ ಆಜ್ಞಾನುಸಾರ, ಆಳಿದ ಮಹಾಸ್ವಾಮಿಯವರಾದ ಶ್ರೀಕೃಷ್ಣರಾಜ ಒಡೆಯರ್ ಬಹದ್ದೂರವರಿಂದ ಕರ್ಣಾಟಕ ಭಾಷೆಯಲ್ಲಿ ವಾಕ್ಯರೂಪವಾಗಿ ವಿರಚಿತವಾದ ಶ್ರೀಕೃಷ್ಣರಾಜ ವಾಣೀವಿಲಾಸವೆಂಬ ಶ್ರೀಮನ್ಮಹಾಭಾರತದ ಕನ್ನಡದ ಟೀಕನ್ನು ಲೋಕೋಪಕಾರಾರ್ಥವಾಗಿರುವಂತೆ, 1884–85ನೇ ಇಸವಿಯಲ್ಲಿ ಮೈಸೂರು ಅರಮನೆಯ ಜಗನ್ಮೋಹನ ಮುದ್ರಾಕ್ಷರ ಶಾಲೆಯಲ್ಲಿ ವಿರಾಟಪರ್ವವನ್ನೂ ಉದ್ಯೋಗಪರ್ವವನ್ನೂ ಮುದ್ರಿಸಿ ಪ್ರಚಾರಪಡಿಸಿರುವ ವಿಷಯವು ಸರ್ವರಿಗೂ ವಿದಿತವಾಗಿರುವದಷ್ಟೆ.

ಶ್ರೀಮನ್ಮಹಾರಾಜರವರ ಆಜ್ಞೆಯಂ ಪಡೆದು ಉಳಿದಿದ್ದ ಹದಿನಾರು ಪರ್ವಗಳಲ್ಲಿ ಆದಿಪರ್ವವೂ ಸಭಾಪರ್ವವೂ ಬೆಂಗಳೂರಲ್ಲಿರುವ ಚಾಮುಂಡೇಶ್ವರಿ ಮುದ್ರಾಶಾಲೆಯಲ್ಲಿ ಮುದ್ರಿಸಲ್ಪಟ್ಟು ಈಗ ಕ್ರಯಕ್ಕೆ ಸಿದ್ಧವಾಗಿರುತ್ತದೆ.

ಈಗ ನಮ್ಮಲ್ಲಿ ಕರ್ಣಪರ್ವವು ಮುದ್ರಿಸಲ್ಪಟ್ಟು ಕ್ರಯಕ್ಕೆ ಸಿದ್ಧವಾಗಿರುತ್ತದೆ. ಇದರ ಕ್ರಯವು ಪ್ರತಿ ಬಂದಕ್ಕೆ ರೂಪಾಯಿ 1—12—0, ಟಪಾಲ್ ಹಾಸಲ್ ಸಹಿತ ರೂಪಾಯಿ 2—0—0, ಬೇಕಾದವರು ಈ ಕೆಳಗೆ ರುಜು ಮಾಡಿರುವವರಿಗೆ ಕ್ರಯವನ್ನು ಕಳುಹಿಸಿ ಬರೆದರೆ ಪುಸ್ತಕವು ದೊರೆಯುತ್ತದೆ. ಈಗ ಅರಣ್ಯಪರ್ವವು ಮುದ್ರಣೆಯಲ್ಲಿರುತ್ತದೆ.

ಮೈಸೂರು,
16ನೇ ಏಪ್ರಿಲ್ 1890.

ಬಿ. ಜಿ. ರಾಜಪ್ಪ,
ಮೈಸೂರಲ್ಲಿರುವ ಸರಕಾರದ ಬ್ರಾಂಚ್ ಮುದ್ರಾಶಾಲೆಯ ಫೋರ್‌ಮ್ಯಾನ್.

ಹಾಸನ ಡಿಸ್ಟ್ರಿಕ್ಟ್.

1890ನೇ ಇಸವಿ 2ನೇ ಜೂ೯.

ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಹಾಸನ ಡಿಸ್ಟ್ರಿಕ್ಟ್ ಅರಸೀಕೆರೆ ತಾಲ್ಲೂಕಿನಲ್ಲಿ ಕುರಂಗದ ಕಲ್ಲುಗಳನ್ನ ಜಮಾ ಯಿಸಿಕೊಳ್ಳತಕ್ಕ ಹಕ್ಕುದಾರಿಯು ಸದರೀ ಅರಸೀಕೆರೆ ತಾಲ್ಲೂಕು ಕಚೇರಿಯಲ್ಲಿ ಸ೯ 1890ನೇ ಇಸವಿ ಜುಲೈ ತಾರೀಖು 2ನೇ ದಿವಿ 11 ಘಂಟೆಗೆ ಪ್ರಾರಂಭಿಸಿ ಬಹಿರಂಗವಾಗಿ ಹರಾಜ್ ಮಾಡಲ್ಪಡುವದು.

2. ಅಮಲ್‌ದಾರ್ರು ಅಥವಾ ಶರಸ್ತೇದಾರ್ರು ಹರಾಜ್ ಮಾಡಿಸುವರು.

3. ಈ ಹರಾಜಿನ ಚಡದರಖಾಸ್ತು ಹಾಸನ ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜ್ ಮಂಜೂರ್ಮಾಡಲ್ಪಡುವವರೆಗೂ ಯಂತರ ಕಾಯಮಾದ್ದಾಗಿ ತಿಳಿದುಕೊಳ್ಳಕೂಡದು.

4. ಈ ಇಜಾರೆಯು ಸ೯ 1891ನೇ ಇಸವಿ ಮಾರ್ಚಿ 31ರ ವರಿಗೆ ಜಾರಿಯಲ್ಲಿ ಇರತಕ್ಕದ್ದು.

5. ಕ್ರಯದಾರನು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಶೇಕಡಾ 25 ರೂಪಾಯಿನಂತೆ ಆಗುವ ಮೊಬಲಗನ್ನ ಡಿಪಾ ಜಿಟ್ ಇಡಬೇಕಲ್ಲದೆ ಹರಾಜ್ ಮಂಜೂರ್ಮಾಡಲ್ಪಟ್ಟ ಸಂಗತಿ ಡೆಪ್ಯೂಟಿ ಕಮ್ಮಿಷನರವರಿಂದ ಕ್ರಯದಾರನಿಗೆ ತಿಳಿಸಲ್ಪಟ್ಟು ತಾರೀಖು ಮೊದ ಲು 7 ದಿವಸದ ಒಳಗಾಗಿ ಕ್ರಯದ ಪಟ್ಟು ಮೊಬಲಗಿನ ಮೇಲೆ ರೂಪಾಯಿ 1ಕ್ಕೆ ಬಂದಾಣೆಯಂತೆ ಆಗುವ ಲೋಕಲ್‌ಸೆಸ್ ದೇಖೀಲ್ ಬಾಕಿ ಕ್ರಯದ ಮೊಬಲಗನ್ನ ಸಾವತಿ ಮಾಡದಿದ್ದರೆ ಹಾಗೆ ಡಿಪಾಜಿಟ್ ಇಟ್ಟ ಮೊಬಲಗು ಸರಕಾರಕ್ಕೆ ದಂಡವಾಗಿ ತೆಗದುಕೊಳ್ಳಲ್ಪಡು ವದು ಹಾಗೆ ಡಿಪಾಜಿಟ್ಟು ಮೊಬಲಗು ಹಾಜರ್ಮಾಡದಿದ್ದರೂ ಅಥವಾ ಬಾಕಿ ಕ್ರಯದ ಮೊಬಲಗು ಸಾವತಿ ಮಾಡದಿದ್ದರೂ ಹಕ್ಕುದಾರಿ ಯು ಅವ್ವಲ್ ಕ್ರಯದಾರನ ಖರ್ಚಿಗೂ ಮತ್ತು ನುಕ್ಸಾನಿಗೂ ವಳಪಟ್ಟು ಪುನಹ ವಿಕ್ರಯಿಸಲ್ಪಡುವದು.

6. ಹರಾಜ್ ಶರತ್ತುಗಳು—

(a) ಹಿಡುವಳಿ ಜಮೀನಿನಲ್ಲಿ ಇರತಕ್ಕ ಕಲ್ಲುಗಳನ್ನು ತೆಗದುಕೊಳ್ಳಬೇಕಾದರೆ ಹಿಡುವಳಿದಾರನ ಸಮ್ಮತಿಯನ್ನ ಪಡಿಯಬೇಕು. ಜರ್ಮೀ ಹಿಡುವಳಿದಾರನು ತನ್ನ ಕಲ್ಲುಗಳನ್ನು ಸ್ವಂತ ಪ್ರಯೋಜನಕ್ಕಾಗಿ ತೆಗದುಕೊಳ್ಳಲೂ ಕೂಡದು. ಇಜಾರೇದಾರನಿಗೆ ಮಾರಬೇಕೇ ಹೊರ್ತು ಇತರ ಜನಗಳಿಗೆ ಮಾರಲೂಕೂಡದು.

(b) ಇಜಾರ್‌ದಾರನು ಹುಲ್ಲುಬನ್ನಿ ಇಜಾರ್‌ದಾರರ ಚರಾವು ಹಕ್ಕಿನಲ್ಲಿ ಪ್ರವೇಶಿಸಕೂಡದು.

(c) ಬಂಜರು ಜಮೀನುಗಳು ಸಾಗುವಳಿ ಬಗ್ಯೆ ಪರಭಾರಾಸ್ತು ಬಂದಲ್ಲಿ ಆ ಪ್ರಕಾರ ಸಾಗುವಳಿಗೆ ಕೊಟ್ಟುಬಿಡುವದಕ್ಕೆ ಕುರಂಗ ದ ಇಜಾರೆದಾರನು ಅಡ್ಡಿ ಹೇಳಕೂಡದು. ಅಂತಾ ಜಮೀನುಗಳಲ್ಲಿ ಕುರಂಗದ ಕಲ್ಲುಗಳನ್ನು ತೆಗದುಕೊಳ್ಳತಕ್ಕ ಹಕ್ಕು ಮಾತ್ರ ಇಜಾರೆದಾರನಿಗೆ ವುಂಟು ಇರುತ್ತೆ.

(d) ಇಜಾರೇದಾರನು ಕಲ್ಲುಗಳ್ಳಿಗೋಸ್ಕರ ಜಮೀನುಗಳನ್ನ ಅಗಿಯಕೂಡದು. ಬಂದು ವೇಳೆ ಹಾಗೆ ಅಗದಲ್ಲಿ ಆ ಗುಂಡಿಗಳನ್ನು ತಕ್ಷಣ ಮುಚ್ಚಿಬಿಟ್ಟು ಸಾಗುವಳಿಗೆ ಜಮೀನು ಲಾಯಖು ಇರುವ ಹಾಗೆ ಮಾಡಬೇಕು.